



ಅರುಣ ಪಿ. ಭಟ್ಟ

## ವಾರಭವಿಷ್ಯ: 12.03.2026ರಿಂದ 18.03.2026ರವರೆಗೆ




ವಾರದ ಆರಂಭದ ಎರಡು ದಿನದಲ್ಲಿ ಯೋಜನೆಗಳ ಕಾರ್ಯಸಿದ್ಧಿ. ಬಂಧುಗಳ ಆಗಮನದಿಂದ ಕುಟುಂಬದಲ್ಲಿ ಸಂತಸ. ಮನೆ ಬಾಡಿಗೆಯಿಂದ ಧನಲಾಭ. ರಾಜಕೀಯದವರಿಗೆ ಕೈತಪ್ಪಿ ಹೋಗುವ ಅಧಿಕಾರ ಪ್ರಾಪ್ತಿ. ಗ್ರಂಥರಚನೆಯಲ್ಲಿ ಆಸಕ್ತಿ. ವಾಹನ ಸೌಖ್ಯ. ಮಕ್ಕಳಿಂದ ಮಾನಸಿಕ ಕಿರಿಕಿರಿ. ನಿಮಗೆ ಬರಬೇಕಾದ ಬಾಕಿ ಬರುವುದು. ಶುಭದಿನ: 16. ಶ್ರೀಲಕ್ಷ್ಮೀನರಸಿಂಹ ಪಂಚರತ್ನ ಓದಿರಿ.




ವಾರದ ಪ್ರಾರಂಭದಲ್ಲಿ ಪ್ರವಾಸದಿಂದ ಗೃಹಾಗಮನ. ಸಹೋದರಿಯರಿಂದ ಶುಭವಾರ್ತೆ. ಹಸ್ತಾಲಂಕಾರ ವಸ್ತು ಖರೀದಿ. ವಾರ ಮಧ್ಯದಲ್ಲಿ ಜ್ವರ ಪೀಡೆ ವೈದ್ಯಕೀಯ ಖರ್ಚು. ಕೋರ್ಟ್ ಪ್ರಕರಣದಲ್ಲಿ ಗೆಲುವಿನ ಸಾಧ್ಯತೆ ಹೆಚ್ಚು. ಅವಮಾನಕರ ಪ್ರಸಂಗ. ವಿವಾಹ ಪ್ರಸ್ತಾವದಲ್ಲಿ ಯಶಸ್ಸು. ವಾರಾಂತ್ಯದಲ್ಲಿ ಪರೋಪಕಾರ. ಶುಭದಿನ: 14. ಈಶ್ವರನಿಗೆ ತಿಲಾರ್ಚನೆ ಮಾಡಿರಿ.




ದೈಹಿಕ ಜಾಡ್ಯ ಅಲರ್ಜಿ. ವಿನಾಕಾರಣ ಹೆದರಿಕೆ. ಆದರೆ ಬಹುದಿನಗಳ ನಂತರ ಕುಟುಂಬದಲ್ಲಿ ಸಂತೋಷದ ಸಮಾರಂಭ. ಕಲಾವಿದರು ಮತ್ತು ವಿದ್ಯಾರ್ಥಿಗಳಿಗೆ ಪರೀಕ್ಷೆಯಲ್ಲಿ ಯಶಸ್ಸು. ಸಿಕ್ಕ ಒಳ್ಳೆಯ ಅವಕಾಶದಲ್ಲಿ ಉತ್ತಮ ವಾಗ್ಝರಿ ಪ್ರದರ್ಶನ. ಮಾನ ಸನ್ಮಾನದ ಯೋಗ. ಆರೋಗ್ಯ ಸಮಸ್ಯೆ ಕಾಡಬಹುದು. ಶುಭದಿನ: 13. ಕಾರ್ತಿಕೇಯ ಸ್ತೋತ್ರ ಪಠಣ ಮಾಡಿರಿ.




ವಾರದ ಪ್ರಾರಂಭದಲ್ಲಿ ಮನೆ ಕಟ್ಟುವ ಸಮಸ್ಯೆ ಬಗೆಹರಿಯುವುದು. ಕ್ರಯ ವಿಕ್ರಯದಲ್ಲಿ ವಂಚನೆ ನಡೆಯುವ ಸಂಭವ ಜಾಗ್ರತೆ ವಹಿಸುವುದು ಕ್ಷೇಮ. ವಾರವಿಡೀ ಒಂದಿಲ್ಲೊಂದು ವಿವಾದದಲ್ಲಿ ಸಿಲುಕುವಿರಿ. ತಂದೆಯಿಂದ ಹಣಕಾಸಿನ ಸಹಾಯ ಸಾಧ್ಯತೆ. ಕಾಲಿಗೆ ನೋವು. ಆಸ್ಪತ್ರೆಗೆ ಖರ್ಚು. ನಿರೀಕ್ಷಿತ ಸ್ಪರ್ಧೆಯಲ್ಲಿ ಯಶಸ್ಸು. ಶುಭದಿನ: 15. ಗುರುದತ್ತಾತ್ರೇಯ ಆರಾಧನೆ ಮಾಡಿರಿ.




ಶಾರೀರಿಕವಾಗಿ ಮತ್ತು ಮಾನಸಿಕವಾಗಿ ಉತ್ಸಾಹ ವೃದ್ಧಿಸುವುದು. ಸರ್ಕಾರಿ ಕೆಲಸಗಳು ತ್ವರಿತಗತಿಯಲ್ಲಿ ನಡೆಯುವುದು. ಪರಿಚಿತ ಸ್ತ್ರೀ ವಿರೋಧವನ್ನು ಎದುರಿಸುವ ಸಂಭವ ಇದೆ. ಜಾನುವಾರುಗಳ ವಿಕ್ರಯದಾರರಿಗೆ ಲಾಭ. ಅಜ್ಞಾತವಾಸದಿಂದ ಬಿಡುಗಡೆ. ಮಹತ್ವದ ಮಾತುಕತೆ. ಶುಭದಿನ: 16.ಹನುಮಾನ್ ಚಾಲೀಸ್ ಪಠಿಸಿರಿ.




ಅನಿರೀಕ್ಷಿತ ಖರ್ಚಿನ ಪ್ರಸಂಗ. ಸರ್ಕಾರಿ ಕೆಲಸದಲ್ಲಿ ವ್ಯತ್ಯಯ. ಸೇವಕರಿಂದ ಹಾನಿ, ತೊಂದರೆ. ಬಂಧುಗಳಿಗೆ ಆಪತ್ತು. ಮನೆಗೆಲಸ ಅರ್ಧಕ್ಕೆ ನಿಲ್ಲುವ ತೊಂದರೆ ಎದುರಾಗಬಹುದು. ಪ್ರೇಮ ಪ್ರಸಂಗಗಳಲ್ಲಿ ಭಗ್ನತೆ. ಅಧಿಕಾರಿಗಳಿಗೆ ಹಿನ್ನಡೆ. ವಿದ್ಯಾರ್ಥಿಗಳಿಗೆ ಶುಭ. ಕಬ್ಬಿಣ ಸೇರಿದಂತೆ ಬೇರೆ ಬೇರೆ ಲೋಹ ವ್ಯವಹಾರಸ್ಥರಿಗೆ ಉತ್ತಮ ಲಾಭ. ಶುಭದಿನ: 17. ಉಮಾಮಹೇಶ್ವರ ಪ್ರಾರ್ಥನೆ ಮಾಡಿರಿ.




ವಾರದಲ್ಲಿಯೇ ಉತ್ತಮ ಫಲ ಪ್ರಾಪ್ತಿಯ ರಾಶಿ. ಆಕಸ್ಮಿಕ ಧನಲಾಭ ಆಗುವ ಸಾಧ್ಯತೆ ಇದೆ. ನಿರುದ್ಯೋಗಿಗಳಿಗೆ ಉದ್ಯೋಗ ಸಿಗುವ ಅವಕಾಶ ಇದೆ. ಸಂತತಿ ಇಲ್ಲದವರಿಗೆ ಸಂತತಿಯ ಸೂಚನೆ. ವಿವಾಹ ಅಪೇಕ್ಷಿಗಳಿಗೆ ಸಂಗಾತಿ ಲಭ್ಯ. ಮನೆಗೆಲಸದ ಹೊಸ ಸೇವಕರು ಸಿಗುವರು. ವ್ಯಾಪಾರದಲ್ಲಿ ಲಾಭ. ಕುಟುಂಬ ಸೌಖ್ಯ. ಶುಭದಿನ: 14. ಲಕ್ಷ್ಮೀನಾರಾಯಣ ಹೃದಯ ಪಾರಾಯಣ ಮಾಡಿರಿ.




ವಾರವಿಡೀ ಕಷ್ಟದಲ್ಲೂ ಇಷ್ಟ ಫಲ ಪ್ರಾಪ್ತಿಯಾಗುವುದು. ಪರದೇಶ ಪ್ರವಾಸಕ್ಕೆ ಸಿದ್ಧತೆ ನಡೆಯುವುದು. ಸರ್ಕಾರಿ ಅಧಿಕಾರ ಪ್ರಾಪ್ತಿಯೋಗ. ಶಿಕ್ಷಕರಿಗೆ ಪದೋನ್ನತಿಯೊಡನೆ ವರ್ಗಾವಣೆ ಸಂಭವ. ಕುಟುಂಬ ವರ್ಗದಲ್ಲಿ ಅನಾರೋಗ್ಯ ಕಾಡಬಹುದು. ಪ್ರಾಣಾಪಾಯ ಭೀತಿ. ವಾರಾಂತ್ಯದಲ್ಲಿ ಪರಿಸ್ಥಿತಿ ಸುಧಾರಿಸುವುದು. ಶುಭದಿನ: 18. ದುರ್ಗಾ ಆರಾಧನೆ ಮಾಡಿರಿ.




ಆರೋಗ್ಯದಲ್ಲಿ ಏರುಪೇರು. ಹೆಂಡತಿಯೊಡನೆ ಜಗಳ. ಕಚೇರಿ ಕಾಗದ ಪತ್ರಗಳು ಹಠಾತ್ ಕಾಣೆಯಾಗುವಿಕೆ. ದೂರದಿಂದ ಅಶುಭವಾರ್ತೆ ಬರುವುದು. ದೈನಂದಿನ ಕೆಲಸಗಳು ಸರಾಗ. ದಿಢೀರ್ ಹಿರಿಯ ಅಧಿಕಾರಿಗಳ ಆಗಮನ. ಸ್ತ್ರೀ ಮೂಲಕ ದ್ರವ್ಯಲಾಭ. ಮನೆಯಲ್ಲಿ ದೇವತಾ ಪೂಜೆ ನಡೆಯುವುದು. ಶುಭದಿನ: 14. ಗಣಪತಿಗೆ ದೂರ್ವಾರ್ಚನೆ ಮಾಡಿರಿ.




ಅಕಸ್ಮಾತ್ ಪೂರ್ವದಿಕ್ಕಿನಲ್ಲಿ ಅಪಘಾತ ಭಯ. ಕಾಲು ನೋವಿನ ಸಮಸ್ಯೆ. ಕೌಟುಂಬಿಕ ಖರ್ಚು ಜಾಸ್ತಿಯಾಗುವುದು. ಶತ್ರುಗಳು ತಲೆ ತಗ್ಗಿಸುವರು. ಹಳೆಯ ಮಿತ್ರರ ಆಗಮನ. ಮಕ್ಕಳಿಂದ ಶುಭವಾರ್ತೆ. ಉದ್ಯೋಗ ನಿಮಿತ್ತ ಪ್ರಯಾಣ ಮಾಡಬೇಕಾಗಬಹುದು. ದಾಂಪತ್ಯದಲ್ಲಿ ಸೌಖ್ಯ. ಹಣಕಾಸಿನ ಲಭ್ಯತೆ. ಶುಭದಿನ: 16. ನವಗ್ರಹ ಸ್ತೋತ್ರ ಮಾಡಿರಿ.




ಪ್ರಾರಂಭದಿಂದಲೂ ಶುಭಯೋಗ. ಯಾಂತ್ರಿಕ ವಸ್ತುಗಳ ಖರೀದಿ. ಶೈಕ್ಷಣಿಕ ಖಾತೆಯಲ್ಲಿ ಕೆಲಸದಲ್ಲಿರುವವರಿಗೆ ತಾತ್ಕಾಲಿಕ ಬಡ್ತಿ. ಬ್ಯಾಂಕ್ ನೌಕರರಿಗೆ ವರ್ಗಾವಣೆ ಸಂಭವ. ಕೈಗೊಂಡ ಕೆಲಸಗಳಲ್ಲಿ ನಿರೀಕ್ಷೆಗಿಂತ ಲಾಭ. ಗುತ್ತಿಗೆದಾರರು ಉತ್ತಮ ಧನಲಾಭ ಕಾಣುವಿರಿ. ಮಿತ್ರರಿಂದ ವಂಚನೆ ಸಂಭವ. ಮಕ್ಕಳ ಅನಾರೋಗ್ಯ. ಶುಭದಿನ: 12. ನಾಗಫಣಿ ಪೂಜೆ ಕ್ಷೀರಾಭಿಷೇಕ ಮಾಡಿರಿ.




ವಿನಾಕಾರಣ ಮಿತ್ರರು ಶತ್ರುಗಳಾಗುವರು. ಮೇಲಧಿಕಾರಿಗಳಿಂದ ನೋಟಿಸ್ ಬರಬಹುದು. ಕಲಾವಿದರಿಗೆ, ಸಂಗೀತಗಾರರಿಗೆ ವಾರದ ಮೊದಲರ್ಧ ಉತ್ತಮ. ಸೊಂಟನೋವು ಕಾಣಿಸುವುದು. ಮಕ್ಕಳ ಆರೋಗ್ಯದಲ್ಲಿ ಕೊಂಚ ಪ್ರಗತಿ. ವಿದ್ಯಾರ್ಥಿಗಳಿಗೆ ಅಭ್ಯಾಸದಲ್ಲಿ ಹಿನ್ನಡೆ. ಚಾಲಕರಿಗೆ ಎಚ್ಚರ ಅಗತ್ಯ. ಕೆಟ್ಟ ಜನರಿಂದ ಧನಪ್ರಾಪ್ತಿ. ಕುಟುಂಬ ಸೌಖ್ಯ. ಶುಭದಿನ: 17. ಲಕ್ಷ್ಮೀನಾರಾಯಣ ಹೃದಯ ಪಾರಾಯಣ ಮಾಡಿರಿ.